ಈ ತಾಲ್ಲೂಕಿನ ಕನಸವಾಡಿ ಗ್ರಾಮದಲ್ಲಿ ಒಂದು 66/11 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸುವ ಹಾಗೂ ಇದಕ್ಕೆ ಸಂಬಂಧಿಸಿದ ವಿದ್ಯುತ್ ಪ್ರಸರಣ ಮಾರ್ಗವನ್ನು ನಿರ್ಮಿಸುವ ಕಾಮಗಾರಿಗಳು ಪ್ರಗತಿಯಲ್ಲಿವೆ. ಕಾಮಗಾರಿಗಳನ್ನು ಅಕ್ಟೋಬರ್ 2006ರ ಅಂತ್ಯದ ವೇಳೆಗೆ ಪೂರ್ಣಗೊಳಿಸಿ, ಸದರೀ ವಿದ್ಯುತ್ ಉಪ ಕೇಂದ್ರವನ್ನು ಕಾರ್ಯೋನ್ಮುಖ ಗೊಳಿಸುವ ಗುರಿಯನ್ನು ಹೊಂದಲಾಗಿದೆ.

ಇದೇ ತಾಲ್ಲೂಕಿನ ಗುಂಡಂಗೆರೆ ಗ್ರಾಮದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರದ ನಿರ್ಮಾಣ ಕಾಮಗಾರಿಯನ್ನು ಸಂಪೂರ್ಣ ಗುತ್ತಿಗೆ ಆಧಾರದಲ್ಲಿ ನಿರ್ವಹಿಸಲು ಟೆಂಡರ್‌ಗಳನ್ನು ಈಗಾಗಲೇ ಆಹ್ವಾನಿಸಲಾಗಿದ್ದು, ಟೆಂಡರಿಂಗ್ ಪ್ರಕ್ರಿಯೆಗಳು ಪ್ರಗತಿಯಲ್ಲಿದೆ. ಇದು ಸಂಪೂರ್ಣಗೊಂಡ ನಂತರ ಅರ್ಹ ಗುತ್ತಿಗೆದಾರರನ್ನು ಗೊತ್ತುಪಡಿಸಲಾಗುತ್ತದೆ. ಗೊತ್ತುಪಡಿಸಲಾಗುವ ಗುತ್ತಿಗೆದಾರರಿಗೆ ಕಾಮಗಾರಿಯನ್ನು ವಹಿಸಿಕೊಟ್ಟ ನಂತರ ಏಳು ತಿಂಗಳ ಅವಧಿಯೊಳಗೆ ನಿರ್ಮಾಣ ಕಾರ್ಯಗಳನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

738(954) ಶ್ರೀ ನರಸಿಂಹಸ್ವಾಮಿ ಜೆ. (ದೊಡ್ಡಬಳ್ಳಾಪುರ) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ 148 ಕಿಮೀ. ಜಿಲ್ಲಾ ಮುಖ್ಯ ರಸ್ತೆಗಳು ಹಾಗೂ 66 ಕಿ.ಮೀ. ರಾಜ್ಯ ಹೆದ್ದಾರಿ ರಸ್ತೆಗಳು ಬಹಳ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಇ) ಲೋಕೋಪಯೋಗಿ ಇಲಾಖೆ 2005–06ನೇ ಸಾಲಿನಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿಗೆ ಎಷ್ಟು ಹಣ ನಿಗಧಿಪಡಿಸಿದೆ;

ಈ) ಎಷ್ಟು ಕಿ.ಮೀ. ರಸ್ತೆ ಅಭಿವೃದ್ಧಿಪಡಿಸಿದೆ ಹಾಗೂ ಉಳಿದ ರಸ್ತೆಗಳ ಅಭಿವೃದ್ಧಿಗೆ ಬೇಕಾಗುವ ಕಾಲಾವಕಾಶ ಎಷ್ಟು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಬಂದಿರುತ್ತದೆ.

ಆ) ದೊಡ್ಡಬಳ್ಳಾಪುರ ತಾಲ್ಲೂಕಿನ ರಾಜ್ಯ ಹೆದ್ದಾರಿ ರಸ್ತೆಗಳ ದುರಸ್ಥಿ ಮತ್ತು ನಿರ್ವಹಣೆಯನ್ನು 3 ವರ್ಷಗಳ ನಿರ್ವಹಣೆಯ ಕೆ.ಆರ್.ಡಿ.ಸಿ.ಎಲ್ ಪ್ಯಾಕೇಜ್ ಅಡಿ

ಕೈಗೊಳ್ಳಲಾಗುತ್ತಿದೆ. ಜಿಲ್ಲಾ ಮುಖ್ಯ ರಸ್ತೆಗಳನ್ನು ಅನುದಾನದ ಲಭ್ಯತೆಯ ಮೇರೆಗೆ ದುರಸ್ಥಿಗೊಳಿಸಿ ಅಭಿವೃದ್ಧಿಪಡಿಸಲಾಗುವುದು.

ಇ) 2005–06ನೇ ಸಾಲಿಗೆ ನಿಗದಿಪಡಿಸಿದ ಹಣದ ವಿವರ ಕೆಳಕಂಡಂತಿದೆ.

ರಸ್ತೆಯ ವರ್ಗ	ನಿಗದಿಪಡಿಸಿದ ಹಣ
ರಾಜ್ಯ ಹೆದ್ದಾರಿಗೆ	ರೂ. 212.00 ಲಕ್ಷ
ಜಿಲ್ಲಾ ಮುಖ್ಯ ರಸ್ತೆಗಳಿಗೆ	ರೂ. 66.50 ಲಕ್ಷ
ಒಟ್ಟು	ರೂ. 278.50 ಲಕ್ಷ

ಈ) 66.0 ಕಿ.ಮೀ.ಗಳ ರಾಜ್ಯ ಹೆದ್ದಾರಿಯಲ್ಲಿ 8.0 ಕಿ.ಮೀ. ಉದ್ದವನ್ನು ಅಭಿವೃದ್ಧಿಗೊಳಿಸಿದೆ. ಉಳಿದ 58.0 ಕಿಮೀ. ಉದ್ದವನ್ನು ಶೀಘ್ರ ದುರಸ್ಥಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು. 148.00 ಕಿ.ಮೀ. ಉದ್ದದ ಜಿಲ್ಲಾ ಮುಖ್ಯ ರಸ್ತೆಗಳಲ್ಲಿ 77.0 ಕಿ.ಮೀ. ಉದ್ದವನ್ನು ದುರಸ್ತಿಗೊಳಿಸಿದ್ದು, ಉಳಿದ 71.0 ಕಿ.ಮೀ. ಉದ್ದವನ್ನು ಅನುದಾನ ಲಭ್ಯತೆಯಂತೆ ದುರಸ್ಥಿಗೊಳಿಸಲಾಗುವುದು.

739(955) ಶ್ರೀ ನರಸಿಂಹಸ್ವಾಮಿ ಜೆ. (ದೊಡ್ಡಬಳ್ಳಾಪುರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಗ್ರಾಮಾಂತರ ಪ್ರದೇಶದ ಗ್ರಾಮೀಣ ಸಾರಿಗೆಗಳಲ್ಲಿ ಪ್ರಯಾಣಿಕರು ಒಂದು ವಾಹನದಲ್ಲಿ 100 ರಿಂದ 120ಕ್ಕೆ ಮೀರಿ ಪ್ರಯಾಣಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಹಾಗಿದ್ದಲ್ಲಿ, ಇಂತಹ ಮಾರ್ಗಗಳನ್ನು ಸಮೀಕ್ಷೆ ನಡೆಸಿ ಹೆಚ್ಚಿನ ವಾಹನಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎನ್. ಚಲುವರಾಯಸ್ವಾಮಿ (ಸಾರಿಗೆ ಸಚಿವರು) :

ಅ) ಇಲ್ಲ.

ಆ) ಪ್ರಯಾಣಿಕರ ಹೆಚ್ಚಿನ ಒತ್ತಡ ಕಂಡು ಬಂದ ಮಾರ್ಗಗಳಲ್ಲಿ ಮಾರ್ಗಗಳನ್ನು ಸಮೀಕ್ಷೆ ನಡೆಸಿ ಅಂತಹ ಮಾರ್ಗಗಳಲ್ಲಿ ಹೆಚ್ಚಿನ ಗ್ರಾಮೀಣ ಅನುಸೂಚಿ/ಸರದಿಗಳನ್ನು ಪೂರೈಸಲಾಗುತ್ತಿದೆ.

741(1157) ಶ್ರೀ ನರೇಂದ್ರಬಾಬು ನೆ.ಲ. (ರಾಜಾಜಿನಗರ) : ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ವಿಧಾನಸೌಧದ ಒಳ ಮತ್ತು ಹೊರ ಆವರಣಕ್ಕೆ ಒದಗಿಸಿರುವ ಭದ್ರತಾ ಸಿಬ್ಬಂದಿಗಳ ಸಂಖ್ಯೆ ಎಷ್ಟು (ವರ್ಗಾವಾರು ವಿವರ ಒದಗಿಸುವುದು):